ಅ) *ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಳ್ಳದಿರಲು ಕಾರಣಗಳೇನು?*

ಇ) *ಈ ಹುದ್ದೆಗಳನ್ನು ತುಂಬದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುವುದರಿಂದ, ಸರ್ಕಾರ ಏನು ಕ್ರಮ ತೆಗೆದುಕೊಳ್ಳುವುದು? (ವಿವರ ನೀಡುವುದು).*

ಡಾ|| ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಈ ಆಸ್ಪತ್ರೆಗೆ ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರ 3 ಹುದ್ದೆಗಳು ಹಾಗೂ ವಾಹನ ಚಾಲಕರ 2 ಹುದ್ದೆಗಳು ಮಂಜೂರಾಗಿದ್ದು, ಅವು ಭರ್ತಿಯಾಗದೆ ಇರುವುದು ಗಮನಕ್ಕೆ ಬಂದಿರುತ್ತದೆ.

ಆ) ಕಿರಿಯ ಪ್ರಯೋಗಶಾಲಾ ತಂತ್ರಜ್ಞನ ನೇರ ನೇಮಕಾತಿ ಸದ್ಯದಲ್ಲೇ ಆಗಲಿದ್ದು ಆಗ ಖಾಲಿ ಇರುವ ಈ ತಂತ್ರಜ್ಞರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. ಇಷ್ಟರಲ್ಲಿಯೇ ಗ್ರೂಪ್-ಡಿ ನೌಕರರಿಗೆ ವಾಹನ ಚಾಲಕರಾಗಿ ಪದೋನ್ನತಿ ನೀಡುತ್ತಿದ್ದು ಆಗ ಖಾಲಿ ಇರುವ ಈ ವಾಹನ ಚಾಲಕರ ಹುದ್ದೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ) ಮೇಲೆ ತಿಳಿಸಿದಂತೆ ಕ್ರಮ ಕೈಗೊಂಡು ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ದ.ಕನ್ನಡ ಜಿಲ್ಲೆಯಲ್ಲಿ ದುಸ್ಥಿತಿಯಲ್ಲಿರುವ ಕೊಳವೆ ಭಾವಿಗಳು

792 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)*

ಆ) *ಇದರಲ್ಲಿ ಸುಸ್ಥಿತಿಯಲ್ಲಿರುವ ಬಾವಿಗಳ ಸಂಖ್ಯೆ ಎಷ್ಟು?*

ಇ) *ದುಸ್ಥಿತಿಯಲ್ಲಿರುವ ಬಾವಿಗಳನ್ನು ಸರಿಪಡಿಸಿ ಸಾರ್ವಜನಿಕ ಉಪಯೋಗಕ್ಕೆ ಯಾವಾಗ ಎಂದು ನೀಡಲಾಗುವುದು (ವಿವರ ನೀಡುವುದು)*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು) :

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 10,535 ಕೊಳವೆಬಾವಿಗಳನ್ನು ಕೊರೆಯಲಾಗಿದೆ. (ತಾಲ್ಲೂಕುವಾರು ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ)

ಆ) ಇದರಲ್ಲಿ 8,894 ಕೊಳವೆ ಬಾವಿಗಳು ಸುಸ್ಥಿತಿಯಲ್ಲಿರುತ್ತವೆ.

ಇ) ಸಾಮಾನ್ಯವಾಗಿ ಕೊಳವೆ ಬಾವಿಗಳ ದುರಸ್ತಿಯನ್ನು ದೂರು ಬಂದ ಒಂದು ವಾರದೊಳಗೆ ಕೈಗೊಳ್ಳಲಾಗುವುದು.

ಶ್ರೀ ಯು. ಆರ್. ಸಭಾಪತಿ (ಉಡುಪಿ) ಕರ್ನಾಟಕ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1310ರ ಅನುಬಂಧ-1

ಬಾವಿಗಳ ತಾಲ್ಲೂಕುವಾರು ವಿವರ

ಕ್ರಮ ಸಂಖ್ಯೆ	ತಾಲ್ಲೂಕಿನ ಹೆಸರು	ಕೊರೆದಿರುವ ಕೊಳವೆಬಾವಿಗಳ ಸಂಖ್ಯೆ	ಸುಸ್ಥಿತಿಯಲ್ಲಿರುವ ಕೊಳವೆ ಬಾವಿಗಳ ಸಂಖ್ಯೆ
1.	ಮಂಗಳೂರು	1112	938
2.	ಸೂಳ್ಯ	746	670
3.	ಪುತ್ತೂರು	1202	1127
4.	ಬಂಟ್ವಾಳ	1525	1315
5.	ಉಡುಪಿ	1862	1510
6.	ಕುಂದಾಪುರ	1367	1128
7.	ಕಾರ್ಕಳ	1779	1402
8.	ಬೆಳ್ತಂಗಡಿ	942	804
	ಒಟ್ಟು	**10535**	**8894**

ವಿರಾಜಪೇಟೆ ತಾಲ್ಲೂಕಿನಲ್ಲಿರುವ ಆಸ್ಪತ್ರೆಗಳಿಗೆ ವೈದ್ಯರ ಹಾಗೂ ಸಿಬ್ಬಂದಿ ನೇಮಕಾತಿ

795 - ಶ್ರೀ ಹೆಚ್. ಡಿ.ಬಸವರಾಜು (ವಿರಾಜಪೇಟೆ) : ಮಾನ್ಯ ಆರೋಗ್ಯ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿರಾಜಪೇಟೆ ತಾಲ್ಲೂಕಿನಲ್ಲಿರುವ ಆಸ್ಪತ್ರೆಗಳಲ್ಲಿ ವೈದ್ಯರ ಹಾಗೂ ಇತರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕೊರತೆ ಇರುವ ವೈದ್ಯರ ಮತ್ತು ಇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು?

ಇ) ಹಾಗಿದ್ದಲ್ಲಿ ಸದರಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುತ್ತದೆ?

ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಕೊರತೆ ಇರುವುದು

ವೈದ್ಯರು	15
ಸಿಬ್ಬಂದಿ	89